ವಿಜಯ ಕರ್ನಾಟಕ
ಸೋಮವಾರ, 17 ಜೂನ್ 2024,

ವಿಶ್ವ ರಕ್ತದಾನಿಗಳ ದಿನಾಚರಣೆ

# ರಕ್ತಕ್ಕೆ ಜಾತಿ, ಧರ್ಮದ ಭೇದವಿಲ್ಲ

■ ವಿಕ ಸುದ್ದಿಲೋಕ ಉಡುಪಿ

ವಿಶ್ವ ರಕ್ತದಾನಿಗಳ ದಿನದ ಅಂಗವಾಗಿ ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ರಕ್ತದಾನ ದಿನಾಚರಣೆ ನಡೆಯಿತು.

ಈ ಸಂದರ್ಭ ರಕ್ತದಾನಿಗಳ ಪ್ರೇರಕರನ್ನು ಸನ್ಮಾನಿಸಲಾಯಿತು. ಕುಂದಾಪುರ ಉಪ ವಿಭಾಗದ ಕಮಿಷನರ್ ರಶ್ಮಿ ಎಸ್.ಆರ್. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ರಕ್ತಕ್ಕೆ ಜಾತಿ, ಧರ್ಮದ ಭೇದವಿಲ್ಲ, ಅಪಘಾತ ಸಹಿತ ತುರ್ತು ಅವಘಡದಲ್ಲಿ ಸಿಲುಕಿದವರಿಗೆ ರಕ್ತಕ್ಕೆ ಪರ್ಯಾಯ ವ್ಯವಸ್ಥೆ ಇಲ್ಲ. ದಾನಿಗಳ ಮೂಲಕವೇ ಅವಶ್ಯವಿದ್ದವರಿಗೆ ಪೂರೈಸಬೇಕಾಗಿದೆ. ಈ ನಿಟ್ಟಿನಲ್ಲಿ ಎಲ್ಲ ಅರ್ಹ ದಾನಿಗಳು ರಕ್ತದಾನ ಮಾಡುವುದರ ಮೂಲಕ ಇತರರ ಜೀವ ಉಳಿಸಲು ಸಹಕರಿಸಬೇಕೆಂದರು.

ಕೆಎಂಸಿ ಮಣಿಪಾಲದ ಡೀನ್ ಡಾ. ಪದ್ಮರಾಜ್ ಹೆಗ್ಡೆ ಮಾತನಾಡಿದರು.




ಕುಂದಾಪುರ ಉಪವಿಭಾಗ ಕಮಿಷನರ್ ರಶ್ಮಿ ಎಸ್.ಆರ್. ರಕ್ತದಾನ ದಿನಾಚರಣೆ ಉದ್ಘಾಟಿಸಿದರು.

ರಕ್ತದಾನಿಗಳ ಪ್ರೇರಕರನ್ನು, ಕಸ್ತೂರ್ಬಾ ಆಸ್ಪತ್ರೆ ರಕ್ತ ಕೇಂದ್ರದ ಅತ್ಯುತ್ತಮ ಸಿಬ್ಬಂದಿಯನ್ನು ಸನ್ಮಾನಿಸಲಾಯಿತು. ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಚಿತ್ರಕಲಾ ಸ್ಪರ್ಧೆ ಹಾಗೂ ಕೆಎಂಸಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಸ್ಲೋಗನ್ ಬರೆಯುವ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಯ ಸಿಒಒ ಡಾ. ಆನಂದ್ ವೇಣು ಗೋಪಾಲ್, ವೈದ್ಯಕೀಯ ಅಧೀಕ್ಷಕ ಡಾ. ಅವಿನಾಶ್ ಶೆಟ್ಟಿ, ರಕ್ತ ಕೇಂದ್ರದ ಮುಖ್ಯಸ್ಥ ಡಾ.ಶಮೀ ಶಾಸ್ತ್ರೀ, ರಕ್ತ ಕೇಂದ್ರದ ಸಹ ಪ್ರಾಧ್ಯಾಪಕ ಡಾ. ಗಣೇಶ್ ಮೋಹನ್ ಉಪಸ್ಥಿತರಿದ್ದರು. ಡಾ. ಗಣೇಶ್ ಮೋಹನ್ ವಂದಿಸಿದರು. ವಿಶ್ವೇಶ ಎನ್. ಅವರು ರಕ್ತದಾನಿಗಳ ಪ್ರೇರಕರ ಪಟ್ಟಿಯನ್ನು ವಾಚಿಸಿದರು. ಡಾ. ಚೆನ್ನ ದೀಪಿಕಾ ನಿರೂಪಿಸಿದರು.

ಪ್ರಜಾವಾಣಿ
ಶನಿವಾರ ● ಜೂನ್ 15, 2024

# ರಕ್ತಕ್ಕೆ ಜಾತಿ-ಧರ್ಮ, ಪರ್ಯಾಯವೂ ಇಲ್ಲ: ರಶ್ಮಿ ಎಸ್.ಆರ್.

ಉಡುಪಿ: ರಕ್ತಕ್ಕೆ ಜಾತಿ, ಧರ್ಮ ಇಲ್ಲ ಮತ್ತು ಅದಕ್ಕೆ ಪರ್ಯಾಯವೂ ಇಲ್ಲ. ಅದನ್ನು ದಾನದ ಮೂಲಕವೇ ಅವಶ್ಯವಿದ್ದವರಿಗೆ ಪೂರೈಸಬೇಕಾಗಿದೆ. ಆದ್ದರಿಂದ ಎಲ್ಲ ಅರ್ಹ ದಾನಿಗಳು ರಕ್ತದಾನ ಮಾಡುವುದರ ಮೂಲಕ ಇತರರ ಜೀವ ಉಳಿಸಲು ಸಹಕರಿಸಬೇಕು ಎಂದು ಉಪ ವಿಭಾಗಾಧಿಕಾರಿ ರಶ್ಮಿ ಎಸ್.ಆರ್. ಹೇಳಿದರು.

ಮಣಿಪಾಲದ ಕಸ್ತೂರ್ಬಾ ಆಸ್ಪತ್ರೆಯಲ್ಲಿ ಹಮ್ಮಿಕೊಂಡಿದ್ದ ವಿಶ್ವ ರಕ್ತದಾನಿಗಳ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಒಂದು ಯೂನಿಟ್ ರಕ್ತವು 3 ಜೀವಗಳನ್ನು ಉಳಿಸುತ್ತದೆ. ಭಾರತದಲ್ಲಿ ಯಾವಾಗಲೂ 10 ಲಕ್ಷ ಮಿಲಿಯನ್ ಯೂನಿಟ್ ರಕ್ತದ ಕೊರತೆಯಿದೆ ಎಂದರು.

ಮಣಿಪಾಲ ಕೆಎಂಸಿಯ ಡೀನ್ ಡಾ.ಪದ್ಮರಾಜ್ ಹೆಗ್ಡೆ ಮಾತನಾಡಿ, ಪ್ರತಿ ಎರಡು ಸೆಕೆಂಡ್‌ಗೆ ಒಬ್ಬರಿಗೆ ರಕ್ತದ ಅವಶ್ಯಕತೆ ಇರುತ್ತದೆ. ಒಬ್ಬ ಆರೋಗ್ಯವಂತ 18ನೇ ವರ್ಷಕ್ಕೆ ರಕ್ತದಾನ ಮಾಡಲು ಆರಂಭಿಸಿ ವರ್ಷಕ್ಕೆ 3 ಬಾರಿ ದಾನ ಮಾಡಿದರೆ, ಅವನಿಗೆ 60 ವರ್ಷ ಆಗುವಾಗ 30 ಗ್ಯಾಲನ್‌ನಷ್ಟು ರಕ್ತದಾನ ಮಾಡಬಹುದು. ಇದರಿಂದ ಕಡಿಮೆ ಪಕ್ಷ 500 ಜನರ ಜೀವ ಉಳಿಸಬಹುದು. ಆದ್ದರಿಂದ ತಾವೂ ರಕ್ತದಾನ ಮಾಡುವುದರೊಂದಿಗೆ ಇತರರಿಗೂ ದಾನ ಮಾಡುವಂತೆ ಪ್ರೇರೇಪಿಸಬೇಕು ಎಂದರು.

ಮಣಿಪಾಲದ ಮಾಹೆ ಬೋಧನಾ ಆಸ್ಪತ್ರೆಯ ಸಿಒಒ ಡಾ.ಆನಂದ್ ವೇಣುಗೋಪಾಲ್ ಗೌರವ ಅತಿಥಿಗಳಾಗಿದ್ದರು. ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ರಕ್ತ ಕೇಂದ್ರದ ಮುಖ್ಯಸ್ಥ ಡಾ.ಶಮೀ ಶಾಸ್ತ್ರಿ, ರಕ್ತ ಕೇಂದ್ರದ ಸಹ ಪ್ರಾಧ್ಯಾಪಕ ಡಾ.ಗಣೇಶ್ ಮೋಹನ್ ಪಾಲ್ಗೊಂಡಿದ್ದರು.

ರಕ್ತದಾನಿಗಳ ಪ್ರೇರಕರನ್ನು, ಕಸ್ತೂರ್ಬಾ ಆಸ್ಪತ್ರೆ ರಕ್ತ ಕೇಂದ್ರದ ಅತ್ಯುತ್ತಮ ಸಿಬ್ಬಂದಿಯನ್ನು ಸನ್ಮಾನಿಸಲಾಯಿತು. ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಚಿತ್ರಕಲಾ ಸ್ಪರ್ಧೆ ಹಾಗೂ ಕೆಎಂಸಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಸ್ಲೋಗನ್ ಬರೆಯುವ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಡಾ.ಅವಿನಾಶ್ ಶೆಟ್ಟಿ ಸ್ವಾಗತಿಸಿದರು. ಡಾ.ಗಣೇಶ್ ಮೋಹನ್ ವಂದಿಸಿದರು. ವಿಶ್ವೇಶ ಎನ್.ಅವರು ರಕ್ತದಾನಿಗಳ ಪ್ರೇರಕರನ್ನು ಗೌರವಿಸಿದ ಪಟ್ಟಿಯನ್ನು ಓದಿದರು. ಡಾ. ಚೆನ್ನ ದೀಪಿಕಾ ಕಾರ್ಯಕ್ರಮ ನಿರೂಪಿಸಿದರು.




ವಿಜಯವಾಣಿ
● VIJAYAVANI » MANGALURU
ಶನಿವಾರ 15 ಜೂನ್ 2024
15 JUNE 2024

# ಸ್ವಯಂಪ್ರೇರಣೆಯಿಂದ ನಿರಂತರ ಸೇವೆ ಅಗತ್ಯ

## ಜಿಲ್ಲಾ ಸರ್ಜನ್ ಡಾ.ಅಶೋಕ್ ಎಚ್. ಸಲಹೆ



ಉಡುಪಿಯಲ್ಲಿ ಆಯೋಜಿಸಿದ್ದ ವಿಶ್ವ ರಕ್ತದಾನಿಗಳ ದಿನಾಚರಣೆಯಲ್ಲಿ ಐವರು ರಕ್ತದಾನಿಗಳನ್ನು ಸನ್ಮಾನಿಸಲಾಯಿತು. ಡಾ.ಅಶೋಕ್ ಎಚ್., ಡಾ.ಜಿ.ಎಸ್.ಚಂದ್ರಶೇಖರ್, ಬಸ್ರೂರು ರಾಜೀವ್ ಶೆಟ್ಟಿ, ಡಾ.ಅಶೋಕ ಕುಮಾರ್ ವೈ.ಜಿ. ಮತ್ತಿತರರು ಇದ್ದರು.

■ ವಿಜಯವಾಣಿ ಸುದ್ದಿಜಾಲ ಉಡುಪಿ

ಯಾವುದೇ ಭೇದ-ಭಾವ ಇಲ್ಲದೆ ಅಗತ್ಯ ಇರುವವರಿಗೆ ರಕ್ತ ನೀಡುವುದು ನಮ್ಮೆಲ್ಲರ ಉದ್ದೇಶ, ಕರ್ತವ್ಯವಾಗಬೇಕಿದೆ. ಸಮಾಜದಲ್ಲಿ ರಕ್ತದ ನಿರಂತರ ಸೇವೆಯ ಅವಶ್ಯಕತೆ ಇದ್ದು, ಯುವಜನರು ಸ್ವಯಂಪ್ರೇರಣೆಯಿಂದ ರಕ್ತದಾನ ಮಾಡಿ ಮತ್ತೊಬ್ಬರ ಜೀವ ಉಳಿಸುವ ಪುಣ್ಯಕಾರ್ಯಕ್ಕೆ ಕೈ ಜೋಡಿಸಬೇಕು ಎಂದು ಜಿಲ್ಲಾಸ್ಪತ್ರೆ ಸರ್ಜನ್ ಡಾ.ಅಶೋಕ್ ಎಚ್. ಕರೆ ನೀಡಿದರು.

ಉಡುಪಿ ಅಜ್ಜರಕಾಡಿನಲ್ಲಿರುವ ರೆಡ್‌ಕ್ರಾಸ್ ಭವನದ ಹೆನ್ರಿ ಡ್ಯುನಾಂಟ್ ಹಾಲ್‌ನಲ್ಲಿ ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಉಡುಪಿ ಜಿಲ್ಲಾ ಘಟಕ ಶುಕ್ರವಾರ ಆಯೋಜಿಸಿದ್ದ ವಿಶ್ವ ರಕ್ತದಾನಿಗಳ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

**ರಕ್ತದಾನಿಗಳ ಜಿಲ್ಲೆ:** ರಕ್ತವನ್ನು ಕೃತಕವಾಗಿ ಉತ್ಪಾದಿಸಲು ಸಾಧ್ಯವಿಲ್ಲ. ಆಸ್ಪತ್ರೆಗಳಲ್ಲಿರುವ ರೋಗಿಗಳಿಗೆ ರಕ್ತದ ಅವಶ್ಯಕತೆ ಇರುತ್ತದೆ. ಹೀಗಾಗಿ ರಕ್ತದಾನಿಗಳ ಮೂಲಕ ರಕ್ತ ಪಡೆದು ಅವರ ಜೀವ ಉಳಿಸಲಾಗುತ್ತಿದೆ. ಉಡುಪಿಯು ರಕ್ತದಾನಿಗಳ ಜಿಲ್ಲೆಯಾಗಿದ್ದು, ಇಲ್ಲಿ ಅನೇಕರು ನಿರಂತರ ರಕ್ತದಾನದ ಮೂಲಕ ಅದೆಷ್ಟೋ ಜನರ ಜೀವ ಉಳಿಸಲು ಕಾರಣೀಕರ್ತರಾಗಿದ್ದಾರೆ ಎಂದು ಶ್ಲಾಘಿಸಿದರು. ಅಧ್ಯಕ್ಷತೆ ವಹಿಸಿದ್ದ ರೆಡ್‌ಕ್ರಾಸ್ ಉಡುಪಿ ಘಟಕದ ಸಭಾಪತಿ ಬಸ್ರೂರು ರಾಜೀವ್ ಶೆಟ್ಟಿ ಮಾತನಾಡಿ, ಯುವಜನತೆ ರಕ್ತದಾನದ ಮಹತ್ವ ಅರಿತುಕೊಂಡು, ರಕ್ತದಾನದ ಮೂಲಕ ಸಮಾಜಕ್ಕೆ ಮಾದರಿಯಾಗಬೇಕು ಎಂದರು. ಆದರ್ಶ ಆಸ್ಪತ್ರೆ ನಿರ್ದೇಶಕ ಡಾ.ಜಿ.ಎಸ್.ಚಂದ್ರಶೇಖರ್ ಮಾತನಾಡಿದರು. ರೆಡ್‌ಕ್ರಾಸ್ ಆಡಳಿತ ಮಂಡಳಿ ಸದಸ್ಯ ಟಿ.ಚಂದ್ರಶೇಖರ್, ಸಂಸ್ಥೆ ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು.

ರೆಡ್‌ಕ್ರಾಸ್ ಉಡುಪಿ ಸಂಸ್ಥೆ ಉಪಸಭಾಪತಿ ಡಾ.ಅಶೋಕ ಕುಮಾರ್ ವೈ.ಜಿ. ಪ್ರಾಸ್ತಾವಿಕ ಮಾತನಾಡಿ, ಸ್ವಾಗತಿಸಿದರು. ಖಜಾಂಚಿ ರಮಾದೇವಿ ವಂದಿಸಿದರು. ರಾಘವೇಂದ್ರ ಪ್ರಭು ಕರ್ವಾಲ್ ಕಾರ್ಯಕ್ರಮ ನಿರೂಪಿಸಿದರು.

### ಐವರು ರಕ್ತದಾನಿಗಳಿಗೆ ಸನ್ಮಾನ

**ಅನೇಕ ಬಾರಿ ರಕ್ತದಾನ ಮಾಡಿ ನಿರಂತರ ಸೇವೆಯಲ್ಲಿ ತೊಡಗಿರುವ ರಕ್ತದಾನಿಗಳಾದ ಬನ್ನಾಡಿ ರಾಘವೇಂದ್ರ ಶೆಟ್ಟಿ, ಸುದರ್ಶನ್ ಕೆ.ಕುಂದಾಪುರ, ಕೆ.ದೀಪಕ್ ಕಾಮತ್, ಹರೀಶ್ ಅಮೀನ್ ಹಾಗೂ ಚೇತನ್‌ಕುಮಾರ್ ಅವರನ್ನು ಸನ್ಮಾನಿಸಲಾಯಿತು.**

## 1 ಮಿಲಿಯನ್ ಯೂನಿಟ್ ರಕ್ತ ಕೊರತೆ




ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆಯನ್ನು ಕುಂದಾಪುರ ಉಪವಿಭಾಗಾಧಿಕಾರಿ ರಶ್ಮಿ ಎಸ್.ಆರ್. ಉದ್ಘಾಟಿಸಿದರು. ಕೆಎಂಸಿ ಡೀನ್ ಡಾ.ಪದ್ಮರಾಜ್ ಹೆಗ್ಡೆ, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆ ಸಿಒಒ ಡಾ.ಆನಂದ್ ವೇಣುಗೋಪಾಲ್, ಕೆಎಂಸಿ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ ಇದ್ದರು.

■ ವಿಜಯವಾಣಿ ಸುದ್ದಿಜಾಲ ಉಡುಪಿ

ಭಾರತದಲ್ಲಿ 1 ಮಿಲಿಯನ್ ಯೂನಿಟ್ ರಕ್ತದ ಕೊರತೆಯಿದ್ದು, ಒಂದು ಯುನಿಟ್ ರಕ್ತ 3 ಜೀವಗಳನ್ನು ಉಳಿಸುತ್ತದೆ. ರಕ್ತಕ್ಕೆ ಪರ್ಯಾಯ ವ್ಯವಸ್ಥೆ ಇಲ್ಲ. ಅದನ್ನು ದಾನದ ಮೂಲಕವೇ ಅವಶ್ಯವಿದ್ದವರಿಗೆ ಪೂರೈಸಬೇಕಾಗಿದೆ. ಆದ್ದರಿಂದ ಎಲ್ಲ ಅರ್ಹ ದಾನಿಗಳು ರಕ್ತದಾನ ಮಾಡುವ ಮೂಲಕ ಇತರರ ಜೀವ ಉಳಿಸಲು ಸಹಕರಿಸಬೇಕು ಎಂದು ಕುಂದಾಪುರ ಉಪವಿಭಾಗಾಧಿಕಾರಿ ರಶ್ಮಿ ಎಸ್.ಆರ್. ಹೇಳಿದರು.

**» ವಿಶ್ವ ರಕ್ತದಾನಿಗಳ ದಿನಾಚರಣೆ ಉದ್ಘಾಟಿಸಿ ರಶ್ಮಿ ಎಸ್.ಆರ್. ಅನಿಸಿಕೆ**

ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆಯನ್ನು ಶುಕ್ರವಾರ ಉದ್ಘಾಟಿಸಿ ಮಾತನಾಡಿದರು.

ಕೆಎಂಸಿ ಡೀನ್ ಡಾ.ಪದ್ಮರಾಜ್ ಹೆಗ್ಡೆ ಮಾತನಾಡಿ, ಪ್ರತೀ ಎರಡು ಸೆಕೆಂಡ್ಸ್‌ಗೆ ಒಬ್ಬರಿಗೆ ರಕ್ತದ ಅವಶ್ಯಕತೆ ಇದೆ. ಒಬ್ಬ ಆರೋಗ್ಯವಂತ 18ನೇ ವರ್ಷಕ್ಕೆ ರಕ್ತದಾನ ಆರಂಭಿಸಿ ವರ್ಷಕ್ಕೆ 3 ಬಾರಿಯಂತೆ 60 ವರ್ಷಕ್ಕೆ 30 ಗ್ಯಾಲನ್ ರಕ್ತದಾನ ಮಾಡಿ, ಕನಿಷ್ಠ 500 ಜನರ ಜೀವ ಉಳಿಸಬಹುದು ಎಂದರು.

ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆ ಸಿಒಒ ಡಾ.ಆನಂದ್ ವೇಣುಗೋಪಾಲ್ ಅತಿಥಿಗಳಾಗಿದ್ದರು. ಕೆಎಂಸಿ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ರಕ್ತ ಕೇಂದ್ರ ಮುಖ್ಯಸ್ಥೆ ಡಾ.ಶಮೀ ಶಾಸ್ತ್ರಿ, ರಕ್ತ ಕೇಂದ್ರ ಸಹ ಪ್ರಾಧ್ಯಾಪಕ ಡಾ.ಗಣೇಶ್ ಮೋಹನ್ ಉಪಸ್ಥಿತರಿದ್ದರು.

ರಕ್ತದಾನಿಗಳ ಪ್ರೇರಕರನ್ನು, ಕಸ್ತೂರ್ಬಾ ಆಸ್ಪತ್ರೆ ರಕ್ತ ಕೇಂದ್ರದ ಅತ್ಯುತ್ತಮ ಸಿಬ್ಬಂದಿಯನ್ನು ಸನ್ಮಾನಿಸಲಾಯಿತು. ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಚಿತ್ರಕಲಾ ಸ್ಪರ್ಧೆ ಹಾಗೂ ಕೆಎಂಸಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಸ್ಲೋಗನ್ ಬರೆಯುವ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಡಾ.ಚೆನ್ನದೀಪಿಕಾ ಕಾರ್ಯಕ್ರಮ ನಿರೂಪಿಸಿದರು.

15-6-2024
UDAYAVANI - MANIPAL

### ವಿಶ್ವ ರಕ್ತದಾನಿಗಳ ದಿನಾಚರಣೆ

# ರಕ್ತಕ್ಕೆ ರಕ್ತವೇ ಪರ್ಯಾಯ ವ್ಯವಸ್ಥೆ



**ಮಣಿಪಾಲ, ಜೂ.14:** ಒಂದು ಯುನಿಟ್ ರಕ್ತವು 3 ಜೀವಗಳನ್ನು ಉಳಿಸುತ್ತದೆ. ಭಾರತದಲ್ಲಿ ಯಾವಾಗಲೂ 1 ಮಿಲಿಯನ್ ಯುನಿಟ್ ರಕ್ತದ ಕೊರತೆಯಿದೆ. ರಕ್ತಕ್ಕೆ ಜಾತಿ, ಧರ್ಮ ಅಂತ ಇಲ್ಲ ಮತ್ತು ರಕ್ತಕ್ಕೆ ಪರ್ಯಾಯ ವ್ಯವಸ್ಥೆ ಇಲ್ಲ, ಅದನ್ನು ದಾನದ ಮೂಲಕವೇ ಅವಶ್ಯವಿದ್ದವರಿಗೆ ಪೂರೈಸಬೇಕಾಗಿದೆ. ಆದ್ದರಿಂದ ಎಲ್ಲ ಅರ್ಹ ದಾನಿಗಳು ರಕ್ತದಾನ ಮಾಡುವುದರ ಮೂಲಕ ಇತರರ ಜೀವ ಉಳಿಸಲು ಸಹಕರಿಸಬೇಕು ಎಂದು ಕುಂದಾಪುರ ಉಪವಿಭಾಗದ ಸಹಾಯಕ ಆಯುಕ್ತೆ ರಶ್ಮಿ ಎಸ್.ಆರ್. ಹೇಳಿದರು.

ಕಸ್ತೂರ್ಬಾ ಆಸ್ಪತ್ರೆಯ ರಕ್ತನಿಧಿ ಕೇಂದ್ರದಲ್ಲಿ ನಡೆದ ರಕ್ತದಾನಿಗಳ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.ಕೆಎಂಸಿ ಡೀನ್ ಡಾ| ಪದ್ಮರಾಜ್ ಹೆಗ್ಡೆ ಮಾತನಾಡಿ, ಪ್ರತೀ ಎರಡು ಸೆಕೆಂಡ್‌ಗೆ ಒಬ್ಬರಿಗೆ ರಕ್ತದ ಅವಶ್ಯಕತೆ ಇದೆ. ಒಬ್ಬ ಆರೋಗ್ಯವಂತ 18ನೇ ವರ್ಷಕ್ಕೆ ರಕ್ತದಾನ ಮಾಡಲು ಆರಂಭಿಸಿ ವರ್ಷಕ್ಕೆ 3 ಬಾರಿ ದಾನ ಮಾಡಿದರೆ ಅವನಿಗೆ 60 ವರ್ಷ ಆಗುವಾಗ 30 ಗ್ಯಾಲನ್ ನಷ್ಟು ರಕ್ತ ದಾನ ಮಾಡಿದಂತಾಗುತ್ತದೆ. ಇದರಿಂದ ಕಡಿಮೆ ಎಂದರೂ 500 ಮಂದಿಯ ಜೀವ ಉಳಿಸಬಹುದು. ಆದ್ದರಿಂದ ತಾವೂ ರಕ್ತ ದಾನ ಮಾಡುವುದರೊಂದಿಗೆ ಇತರರಿಗೂ ದಾನ ಮಾಡುವಂತೆ ಪ್ರೇರೇಪಿಸಬೇಕು ಎಂದರು.ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಯ ಸಿಒಒ ಡಾ| ಆನಂದ್ ವೇಣುಗೋಪಾಲ್, ರಕ್ತನಿಧಿ ಕೇಂದ್ರದ ಮುಖ್ಯಸ್ಥೆ ಡಾ| ಶಮೀ ಶಾಸ್ತ್ರಿ ಉಪಸ್ಥಿತರಿದ್ದರು. ರಕ್ತದಾನಿಗಳ ಪ್ರೇರಕರನ್ನು, ಕಸ್ತೂರ್ಬಾ ಆಸ್ಪತ್ರೆ ರಕ್ತನಿಧಿ ಕೇಂದ್ರದ ಅತ್ಯುತ್ತಮ ಸಿಬಂದಿಯನ್ನು ಸಮ್ಮಾನಿಸಲಾಯಿತು. ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಚಿತ್ರಕಲಾ ಸ್ಪರ್ಧೆ ಹಾಗೂ ಕೆಎಂಸಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಸ್ಲೋಗನ್ ಬರೆಯುವ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ವಿಶ್ವೇಶ ಎನ್. ವರದಿ ವಾಚಿಸಿದರು. ವೈದ್ಯಕೀಯ ಅಧೀಕ್ಷಕ ಡಾ| ಅವಿನಾಶ್ ಶೆಟ್ಟಿ ಸ್ವಾಗತಿಸಿದರು. ರಕ್ತನಿಧಿ ಕೇಂದ್ರದ ಸಹ ಪ್ರಾಧ್ಯಾಪಕ ಡಾ| ಗಣೇಶ್ ಮೋಹನ್ ವಂದಿಸಿದರು. ಡಾ| ಚೆನ್ನ ದೀಪಿಕಾ ನಿರೂಪಿಸಿದರು.

**Drishya News**

https://www.dhrishyanews.com/?p=16387

# ಮಣಿಪಾಲ : ಕಸ್ತೂರ್ಬಾ ಆಸ್ಪತ್ರೆಯಲ್ಲಿ ವಿಶ್ವ ರಕ್ತದಾನಿಗಳ ದಿನ – 2024 ಆಚರಣೆ..!!

ರಕ್ತದಾನಿಗಳ ಪ್ರೇರಕರಿಗೆ ಸನ್ಮಾನ

by **Dhrishya News** – 14/06/2024 in ಸುದ್ದಿಗಳು


0



0 SHARES 18 VIEWS

ಮಣಿಪಾಲ, ಜೂನ್ 14, 2024: "ಸುರಕ್ಷಿತ ರಕ್ತ ಮತ್ತು ರಕ್ತ ವರ್ಗಾವಣೆಗಾಗಿ ಉತ್ಪನ್ನಗಳ" ಅಗತ್ಯದ ಬಗ್ಗೆ ಜಾಗೃತಿ ಮೂಡಿಸಲು ಜೂನ್ 14 ರಂದು ವಿಶ್ವ ರಕ್ತದಾನಿಗಳ ದಿನವನ್ನಾಗಿ ಆಚರಿಸಲಾಗುತ್ತದೆ. ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ, ರಕ್ತ ಸಂಬಂಧಿತ ಉತ್ಪನ್ನಗಳು ಜಗತ್ತಿನಾದ್ಯಂತ ಸಾರ್ವಜನಿಕ ಆರೋಗ್ಯಕ್ಕೆ ನಿರ್ಣಾಯಕವಾಗಿವೆ. ಈ ದಿನವು ಸ್ವಯಂಸೇವಕರು ಮತ್ತು ರಕ್ತದಾನಿಗಳಿಗೆ ಅವರ ಕೊಡುಗೆಗಳಿಗಾಗಿ ಧನ್ಯವಾದ ಹೇಳುವ ಅವಕಾಶವನ್ನು ಸೂಚಿಸುತ್ತದೆ. 2024 ರ ಧ್ಯೇಯ ವಾಕ್ಯ "20 ವರ್ಷಗಳ ಕೊಡುಗೆಯನ್ನು ಆಚರಿಸುತ್ತಿದೆ: ರಕ್ತದಾನಿಗಳಿಗೆ ಧನ್ಯವಾದಗಳು!"

ಈ ಥೀಮ್ ಎರಡು ಪ್ರಮುಖ ಅಂಶಗಳನ್ನು ಎತ್ತಿ ತೋರಿಸುತ್ತದೆ: ರಕ್ತದಾನಿಗಳಿಗೆ ಮೆಚ್ಚುಗೆ: ಕಳೆದ ಎರಡು ದಶಕಗಳಿಂದ, ವಿಶ್ವ ರಕ್ತದಾನಿಗಳ ದಿನವು ಸ್ವಯಂಪ್ರೇರಿತ ರಕ್ತದಾನಿಗಳಿಗೆ ಅಪಾರ ಕೃತಜ್ಞತೆಯನ್ನು ವ್ಯಕ್ತಪಡಿಸಲು ವೇದಿಕೆಯಾಗಿ ಕಾರ್ಯನಿರ್ವಹಿಸುತ್ತಿದೆ. ರಕ್ತ ನೀಡುವ ಅವರ ನಿಸ್ವಾರ್ಥ ಕಾರ್ಯವು ಅಸಂಖ್ಯಾತ ಜೀವಗಳನ್ನು ಉಳಿಸಿದೆ ಮತ್ತು ಸುರಕ್ಷಿತ ಮತ್ತು ಸುರಕ್ಷಿತ ರಕ್ತ ಪೂರೈಕೆಯ ಬೆನ್ನೆಲುಬಾಗಿ ಮುಂದುವರಿಯುತ್ತದೆ.



**Vijayavani**

https://www.vijayavani.net/manipal-kasturba-hospital-celebrates-world-blood-donor-day

# ಭಾರತದಲ್ಲಿ 1 ಮಿ. ಯುನಿಟ್ ರಕ್ತ ಕೊರತೆ: ರಶ್ಮಿ

14/06/2024 8:16 PM




Share WhatsApp Facebook Twitter Linkedin

**ಉಡುಪಿ:** ಭಾರತದಲ್ಲಿ 1 ಮಿಲಿಯನ್ ಯುನಿಟ್ ರಕ್ತದ ಕೊರತೆಯಿದ್ದು, ಒಂದು ಯುನಿಟ್ ರಕ್ತವು 3 ಜೀವಗಳನ್ನು ಉಳಿಸುತ್ತದೆ. ರಕ್ತಕ್ಕೆ ಪರ್ಯಾಯ ವ್ಯವಸ್ಥೆ ಇಲ್ಲ. ಅದನ್ನು ದಾನದ ಮೂಲಕವೇ ಅವಶ್ಯವಿದ್ದವರಿಗೆ ಪೂರೈಸಬೇಕಾಗಿದೆ. ಆದ್ದರಿಂದ ಎಲ್ಲಾ ಅರ್ಹ ದಾನಿಗಳು ರಕ್ತ ದಾನ ಮಾಡುವುದರ ಮೂಲಕ ಇತರರ ಜೀವ ಉಳಿಸಲು ಸಹಕರಿಸಬೇಕು ಎಂದು ಕುಂದಾಪುರ ಉಪವಿಭಾಗಾಧಿಕಾರಿ ರಶ್ಮಿ ಎಸ್.ಆರ್. ಹೇಳಿದರು.

ಶುಕ್ರವಾರ ಮಣಿಪಾಲ ಕಸ್ತೂರ್ಬಾ ಆಸ್ಪತ್ರೆಯಲಿ ವಿಶ್ವ ರಕ್ತದಾನಿಗಳ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು. ಕೆಎಂಸಿ ಡೀನ್ ಡಾ.ಪದ್ಮರಾಜ್ ಹೆಗ್ಡೆ ಮಾತನಾಡಿ, ಪ್ರತಿ ಎರಡು ಸೆಕೆಂಡ್ಸ್‌ಗೆ ಒಬ್ಬರಿಗೆ ರಕ್ತದ ಅವಶ್ಯಕತೆ ಇದೆ. ಒಬ್ಬ ಆರೋಗ್ಯವಂತ 18ನೇ ವರ್ಷಕ್ಕೆ ರಕ್ತ ದಾನ ಆರಂಭಿಸಿ ವರ್ಷಕ್ಕೆ 3 ಬಾರಿಯಂತೆ 60 ವರ್ಷಕ್ಕೆ 30 ಗ್ಯಾಲನ್ ರಕ್ತ ದಾನ ಮಾಡಿ, ಕನಿಷ್ಠ 500 ಜನರ ಜೀವ ಉಳಿಸಬಹುದು ಎಂದರು.

ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಯ ಸಿಒಒ ಡಾ.ಆನಂದ್ ವೇಣುಗೋಪಾಲ್ ಅತಿಥಿಗಳಾಗಿದ್ದರು. ಕೆಎಂಸಿ ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ರಕ್ತ ಕೇಂದ್ರದ ಮುಖ್ಯಸ್ಥೆ ಡಾ.ಶಮೀ ಶಾಸ್ತ್ರಿ, ರಕ್ತ ಕೇಂದ್ರದ ಸಹ ಪ್ರಾಧ್ಯಾಪಕ ಡಾ.ಗಣೇಶ್ ಮೋಹನ್ ಉಪಸ್ಥಿತರಿದ್ದರು.

**Daijiworld**

https://www.daijiworld.com/news/newsDisplay?newsID=1199860

# World Blood Donor Day 2024 observed at Kasturba Hospital, Manipal

Fri, Jun 14 2024 08:03:58 PM

Ads by Google
Send feedback
Why this ad?

***Media Release***

**Udupi, Jun 14:** World Blood Donor Day is observed on June 14 to spread awareness regarding the need for "safe blood and blood products for transfusion." According to the World Health Organization, blood-related products are crucial for public health across the globe.

This day also marks an opportunity to thank volunteers and blood donors for their contributions. The theme for the year 2024 is "20 years of celebrating giving: Thank you blood donors!"

**Publicnext**

https://publicnext.com/article/nid/Udupi/Mangalore/Health-and-Fitness/?lang=kn&node=1008421




# ಮಣಿಪಾಲ: ಕಸ್ತೂರ್ಬಾ ಆಸ್ಪತ್ರೆಯಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆ

ಮಣಿಪಾಲ: ಸುರಕ್ಷಿತ ರಕ್ತ ಮತ್ತು ರಕ್ತ ವರ್ಗಾವಣೆಗಾಗಿ ಉತ್ಪನ್ನಗಳ ಅಗತ್ಯದ ಬಗ್ಗೆ ಜಾಗೃತಿ ಮೂಡಿಸಲು ಜೂನ್ 14 ರಂದು ವಿಶ್ವ ರಕ್ತದಾನಿಗಳ ದಿನವನ್ನಾಗಿ ಆಚರಿಸಲಾಗುತ್ತದೆ. ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ, ರಕ್ತ ಸಂಬಂಧಿತ ಉತ್ಪನ್ನಗಳು ಜಗತ್ತಿನಾದ್ಯಂತ ಸಾರ್ವಜನಿಕ ಆರೋಗ್ಯಕ್ಕೆ ನಿರ್ಣಾಯಕವಾಗಿವೆ. ಈ ದಿನವು ಸ್ವಯಂಸೇವಕರು ಮತ್ತು ರಕ್ತದಾನಿಗಳಿಗೆ ಅವರ ಕೊಡುಗೆಗಳಿಗಾಗಿ ಧನ್ಯವಾದ ಹೇಳುವ ಅವಕಾಶವನ್ನು ಸೂಚಿಸುತ್ತದೆ. 2024 ರ ಧ್ಯೇಯ ವಾಕ್ಯ "20 ವರ್ಷಗಳ ಕೊಡುಗೆಯನ್ನು ಆಚರಿಸುತ್ತಿದೆ:. ರಕ್ತದಾನಿಗಳಿಗೆ ಧನ್ಯವಾದಗಳು!"

ಮಣಿಪಾಲದಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಸಹಾಯಕ ಆಯುಕ್ತೆ ರಶ್ಮಿ ಎಸ್.ಆರ್ ,ಒಂದು ಯುನಿಟ್ ರಕ್ತವು 3 ಜೀವಗಳನ್ನು ಉಳಿಸುತ್ತದೆ, ಭಾರತದಲ್ಲಿ ಯಾವಾಗಲೂ 1 ಮಿಲಿಯನ್ ಯುನಿಟ್ ರಕ್ತದ ಕೊರತೆಯಿದೆ. ರಕ್ತಕ್ಕೆ ಜಾತಿ, ಧರ್ಮ ಅಂತ ಇಲ್ಲ ಮತ್ತು ರಕ್ತಕ್ಕೆ ಪರ್ಯಾಯ ವ್ಯವಸ್ಥೆ ಇಲ್ಲ. ಅದನ್ನು ದಾನದ ಮೂಲಕವೇ ಅವಶ್ಯವಿದ್ದವರಿಗೆ ಪೂರೈಸಬೇಕಾಗಿದೆ. ಆದ್ದರಿಂದ ಎಲ್ಲಾ ಅರ್ಹ ದಾನಿಗಳು ರಕ್ತ ದಾನ ಮಾಡುವುದರ ಮೂಲಕ ಇತರರ ಜೀವ ಉಳಿಸಲು ಸಹಕರಿಸಬೇಕು ಎಂದು ಹೇಳಿದರು.

**Udupi Bulletin**

https://nammaudupibulletin.com/suddigalu/pradeshika/reg-news-udupi-4477/

# ಕೆ.ಎಂ.ಸಿ ಮಣಿಪಾಲ: ವಿಶ್ವ ರಕ್ತದಾನಿಗಳ ದಿನ


By **Udupi Bulletin News Desk** - June 14, 2024 0




**ಮಣಿಪಾಲ, ಜೂ.14:** ಸುರಕ್ಷಿತ ರಕ್ತ ಮತ್ತು ರಕ್ತ ವರ್ಗಾವಣೆಗಾಗಿ ಉತ್ಪನ್ನಗಳ ಅಗತ್ಯದ ಬಗ್ಗೆ ಜಾಗೃತಿ ಮೂಡಿಸಲು ಜೂನ್ 14 ರಂದು ವಿಶ್ವ ರಕ್ತದಾನಿಗಳ ದಿನವನ್ನಾಗಿ ಆಚರಿಸಲಾಗುತ್ತದೆ. ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ, ರಕ್ತ ಸಂಬಂಧಿತ ಉತ್ಪನ್ನಗಳು ಜಗತ್ತಿನಾದ್ಯಂತ ಸಾರ್ವಜನಿಕ ಆರೋಗ್ಯಕ್ಕೆ ನಿರ್ಣಾಯಕವಾಗಿವೆ. ಈ ದಿನವು ಸ್ವಯಂಸೇವಕರು ಮತ್ತು ರಕ್ತದಾನಿಗಳಿಗೆ ಅವರ ಕೊಡುಗೆಗಳಿಗಾಗಿ ಧನ್ಯವಾದ ಹೇಳುವ ಅವಕಾಶವನ್ನು ಸೂಚಿಸುತ್ತದೆ. ರಶ್ಮಿ ಎಸ್‌ಆರ್ ಕೆಎಎಸ್, ಸಹಾಯಕ ಆಯುಕ್ತರು, ಕುಂದಾಪುರ ಮುಖ್ಯ ಅತಿಥಿಯಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕೆಎಂಸಿ ಮಣಿಪಾಲದ ಡೀನ್ ಡಾ ಪದ್ಮರಾಜ್ ಹೆಗ್ಡೆ, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಯ ಸಿಒಒ ಡಾ ಆನಂದ್ ವೇಣುಗೋಪಾಲ್ ಕಾರ್ಯಕ್ರಮದ ಗೌರವ ಅತಿಥಿಗಳಾಗಿದ್ದರು. ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ರಕ್ತ ಕೇಂದ್ರದ ಮುಖ್ಯಸ್ಥ ಡಾ.ಶಮೀ ಶಾಸ್ತ್ರಿ, ರಕ್ತ ಕೇಂದ್ರದ ಸಹ ಪ್ರಾಧ್ಯಾಪಕ ಡಾ.ಗಣೇಶ್ ಮೋಹನ್ ಉಪಸ್ಥಿತರಿದ್ದರು.

**Lokha Bandhu**

https://www.lokabandhunews.in/2024/06/blood-donation-is-supplement-in.html?m=1



# ರಕ್ತದ ಕೊರತೆ ನೀಗಿಸುವಲ್ಲಿ ರಕ್ತದಾನ ಪೂರಕ

Friday, June 14, 2024 -

**ರಕ್ತದ ಕೊರತೆ ನೀಗಿಸುವಲ್ಲಿ ರಕ್ತದಾನ ಪೂರಕ**

*ಲೋಕಬಂಧುನ್ಯೂಸ್ ಡೆಸ್ಕ್, ಮಣಿಪಾಲ*

ಭಾರತದಲ್ಲಿ ಒಂದು ಮಿಲಿಯನ್ ಯೂನಿಟ್ ರಕ್ತದ ಕೊರತೆ ಇದೆ. ಅದನ್ನು ನೀಗಿಸಲು ರಕ್ತದಾನವೊಂದೇ ಪರಿಹಾರ ಎಂದು ಕುಂದಾಪುರ ಉಪವಿಭಾಗಾಧಿಕಾರಿ ರಶ್ಮಿ ಎಸ್. ಆರ್. ಹೇಳಿದರು.
ಮಣಿಪಾಲ ಕೆಎಂಸಿ ಆಸ್ಪತ್ರೆಯಲ್ಲಿ ಶುಕ್ರವಾರ ನಡೆದ ವಿಶ್ವ ರಕ್ತದಾನಿಗಳ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.



**Tulunaduvarthe**

https://tulunaduvarthe.com/manipal-world-blood-donor-day-celebration-at-kasturba-hospital-blood-donation-motivators-honored/



**ಮಣಿಪಾಲ** : "ಸುರಕ್ಷಿತ ರಕ್ತ ಮತ್ತು ರಕ್ತ ವರ್ಗಾವಣೆಗಾಗಿ ಉತ್ಪನ್ನಗಳ" ಅಗತ್ಯದ ಬಗ್ಗೆ ಜಾಗೃತಿ ಮೂಡಿಸಲು ಜೂನ್ 14 ರಂದು ವಿಶ್ವ ರಕ್ತದಾನಿಗಳ ದಿನವನ್ನಾಗಿ ಆಚರಿಸಲಾಗುತ್ತದೆ. ವಿಶ್ವ ಆರೋಗ್ಯ ಸಂಸ್ಥೆಯ ಪ್ರಕಾರ, ರಕ್ತ ಸಂಬಂಧಿತ ಉತ್ಪನ್ನಗಳು ಜಗತ್ತಿನಾದ್ಯಂತ ಸಾರ್ವಜನಿಕ ಆರೋಗ್ಯಕ್ಕೆ ನಿರ್ಣಾಯಕವಾಗಿವೆ. ಈ ದಿನವು ಸ್ವಯಂಸೇವಕರು ಮತ್ತು ರಕ್ತದಾನಿಗಳಿಗೆ ಅವರ ಕೊಡುಗೆಗಳಿಗಾಗಿ ಧನ್ಯವಾದ ಹೇಳುವ ಅವಕಾಶವನ್ನು ಸೂಚಿಸುತ್ತದೆ. 2024 ರ ಧ್ಯೇಯ ವಾಕ್ಯ "20 ವರ್ಷಗಳ ಕೂಡುಗೆಯನ್ನು ಆಚರಿಸುತ್ತಿದೆ: ರಕ್ತದಾನಿಗಳಿಗೆ ಧನ್ಯವಾದಗಳು!"

**ಈ ಥೀಮ್ ಎರಡು ಪ್ರಮುಖ ಅಂಶಗಳನ್ನು ಎತ್ತಿ ತೋರಿಸುತ್ತದೆ: ರಕ್ತದಾನಿಗಳಿಗೆ ಮೆಚ್ಚುಗೆ:** ಕಳೆದ ಎರಡು ದಶಕಗಳಿಂದ, ವಿಶ್ವ ರಕ್ತದಾನಿಗಳ ದಿನವು ಸ್ವಯಂಪ್ರೇರಿತ ರಕ್ತದಾನಿಗಳಿಗೆ ಅಪಾರ ಕೃತಜ್ಞತೆಯನ್ನು ವ್ಯಕ್ತಪಡಿಸಲು ವೇದಿಕೆಯಾಗಿ ಕಾರ್ಯನಿರ್ವಹಿಸುತ್ತಿದೆ. ರಕ್ತ ನೀಡುವ ಅವರ ನಿಸ್ವಾರ್ಥ ಕಾರ್ಯವು ಅಸಂಖ್ಯಾತ ಜೀವಗಳನ್ನು ಉಳಿಸಿದೆ ಮತ್ತು ಸುರಕ್ಷಿತ ಮತ್ತು ಸುರಕ್ಷಿತ ರಕ್ತ ಪೂರೈಕೆಯ ಬೆನ್ನೆಲುಬಾಗಿ ಮುಂದುವರಿಯುತ್ತದೆ.

**ಒಂದು ಮೈಲಿಗಲ್ಲು ವರ್ಷ:** 2024 ಜಾಗೃತಿ ಮೂಡಿಸುವ ಮತ್ತು ರಕ್ತದಾನವನ್ನು ಉತ್ತೇಜಿಸುವ 20 ವರ್ಷಗಳನ್ನು ಸೂಚಿಸುತ್ತದೆ. ಈ ವಾರ್ಷಿಕೋತ್ಸವವು ಸಾಧಿಸಿದ ಪ್ರಗತಿಯನ್ನು ಪ್ರತಿಬಿಂಬಿಸಲು, ನಡೆಯುತ್ತಿರುವ ಸವಾಲುಗಳನ್ನು ಅಂಗೀಕರಿಸಲು ಮತ್ತು ಈ ಕ್ಷೇತ್ರದಲ್ಲಿ ದಣಿವರಿಯಿಲ್ಲದೆ ದುಡಿಯುತ್ತಿರುವ ರಕ್ತದಾನಿಗಳು, ರಕ್ತ ಕೇಂದ್ರಗಳು ಮತ್ತು ಸಂಸ್ಥೆಗಳ ಸಮರ್ಪಣೆಯನ್ನು ಆಚರಿಸಲು ಅವಕಾಶವನ್ನು ಒದಗಿಸುತ್ತದೆ.

ರಶ್ಮಿ ಎಸ್ಆರ್ ಕೆಎಎಸ್ ಮುಖ್ಯ ಅತಿಥಿಯಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕೆಎಂಸಿ ಮಣಿಪಾಲದ ಡೀನ್ ಡಾ ಪದ್ಮರಾಜ್ ಹೆಗ್ಡೆ, ಮಾಹೆ ಮಣಿಪಾಲದ ಬೋಧನಾ ಆಸ್ಪತ್ರೆಯ ಸಿಒಒ ಡಾ ಆನಂದ್ ವೇಣುಗೋಪಾಲ್ ಕಾರ್ಯಕ್ರಮದ ಗೌರವ ಅತಿಥಿಗಳಾಗಿದ್ದರು. ವೈದ್ಯಕೀಯ ಅಧೀಕ್ಷಕ ಡಾ.ಅವಿನಾಶ್ ಶೆಟ್ಟಿ, ರಕ್ತ ಕೇಂದ್ರದ ಮುಖ್ಯಸ್ಥ ಡಾ.ಶಮೀ ಶಾಸ್ತ್ರಿ, ರಕ್ತ ಕೇಂದ್ರದ ಸಹ ಪ್ರಾಧ್ಯಾಪಕ ಡಾ.ಗಣೇಶ್ ಮೋಹನ್ ಉಪಸ್ಥಿತರಿದ್ದರು.